# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 993 (1309)
2. ಸದಸ್ಯರ ಹೆಸರು : ಶ್ರೀ ಕೆ. ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 29.12.2022
4. ಉತ್ತರಿಸುವ ಸಚಿವರು : ಜಲಸಂಪನ್ಮೂಲಸಚಿವರು

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯ ಸರ್ಕಾರದ ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿ ಯಾವ ಹಂತದಲ್ಲಿದೆ; | ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿಗಳ ಪ್ರಸ್ತುತ ಹಂತದ ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಆ) | ಈ ಯೋಜನೆಯನ್ನು ರಾಷ್ಟ್ರೀಯ ಯೋಜನೆಯಾಗಿ ಘೋಷಣೆಮಾಡುವ ನಿರ್ಣಯ ಯಾವ ಹಂತದಲ್ಲಿದೆ? (ಮಾಹಿತಿ ನೀಡುವುದು) | ದಿನಾಂಕ:12.10.2022ರಂದು ಕಾರ್ಯದರ್ಶಿಗಳು (ವೆಚ್ಚ), ಹಣಕಾಸು ಸಚಿವಾಲಯ, ಕೇಂದ್ರ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಾರ್ವಜನಿಕ ಹೂಡಿಕೆ ಮಂಡಳಿಯ ಸಭೆಯಲ್ಲಿ, ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸುವ ಪ್ರಸ್ತಾವನೆಯನ್ನು ಕೇಂದ್ರ ಸಚಿವ ಸಂಪುಟದ ಅನುಮೋದನೆಗೆ ಶಿಫಾರಸ್ಸು ಮಾಡಲಾಗಿರುತ್ತದೆ. ಕೇಂದ್ರ ಸಚಿವ ಸಂಪುಟದ ಅನುಮೋದನೆ ನಿರೀಕ್ಷಿಸಲಾಗಿದೆ. |

**ಸಂಖ್ಯೆ: ಜಸಂಇ 114 ಡಬ್ಲ್ಯೂಎಲ್ಎ 2022**

**(ಗೋವಿಂದ ಎಂ. ಕಾರಜೋಳ)**
**ಜಲಸಂಪನ್ಮೂಲ ಸಚಿವರು**

## ವಿಧಾನ ಪರಿಷತ್ತು ಸದಸ್ಯರಾದ ಮಾನ್ಯ ಶ್ರೀ ಕೆ.ಎಸ್.ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಪ್ರಶ್ನೆ ಸಂಖ್ಯೆ: 993(1309)ಕ್ಕೆ ಅನುಬಂಧ

**ಭಧ್ರಾ ಮೇಲ್ದಂಡೆ ಯೋಜನೆ:**

ಭಧ್ರಾ ಮೇಲ್ದಂಡೆ ಯೋಜನೆಯಡಿ 29.9 ಟಿ.ಎಂ.ಸಿ ನೀರನ್ನು ಬಳಸಿಕೊಂಡು ಮಧ್ಯ ಕರ್ನಾಟಕದ ಬರಪೀಡಿತ ಚಿತ್ರದುರ್ಗ, ಚಿಕ್ಕಮಗಳೂರು, ದಾವಣಗೆರೆ ಹಾಗೂ ತುಮಕೂರು ಜಿಲ್ಲೆಯಲ್ಲಿನ 2,25,515 ಹೆಕ್ಟೇರ್ (5,57,022 ಎಕರೆ) ಭೂ ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ ಪದ್ಧತಿ ಮೂಲಕ ನೀರಾವರಿ ಸೌಲಭ್ಯ ಕಲ್ಪಿಸಲು ಹಾಗೂ ಇದೇ ಜಿಲ್ಲೆಗಳಡಿ ಬರುವ 367 ಕೆರೆಗಳಿಗೆ ಅವುಗಳ ಸಾಮರ್ಥ್ಯದ ಶೇ.50 ರಷ್ಟಕ್ಕೆ ನೀರು ತುಂಬಿಸಲು ಯೋಜಿಸಲಾಗಿರುತ್ತದೆ. ಸದರಿ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತ ರೂ.21473.67 ಕೋಟಿಗಳ ವಿವರವಾದ ಯೋಜನಾ ವರದಿಗೆ ದಿನಾಂಕ: 16.12.2020 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಭದ್ರಾ ಮೇಲ್ದಂಡೆ ಯೋಜನೆಯನ್ನು ಎರಡು ಹಂತದಲ್ಲಿ ಕೈಗೊಳ್ಳಲು ಉದ್ದೇಶಿಸಲಾಗಿದ್ದು, ವಿವರಗಳು ಈ ಕೆಳಗಿನಂತಿವೆ;

**ಯೋಜನೆಯ ಪ್ರಸ್ತುತ ಹಂತ**

1. **ಹಂತ-1**

- ಪ್ರಥಮ ಹಂತದಲ್ಲಿನ ತುಂಗಾ ನದಿಯಿಂದ ಭದ್ರಾ ಜಲಾಶಯಕ್ಕೆ ಲಿಫ್ಟ್ ಮಾಡುವ (ಪ್ಯಾಕೇಜ್-1) ಕಾಮಗಾರಿ ಪ್ರಗತಿಯಲ್ಲಿದೆ. ಇನ್ನುಳಿದಂತೆ ಭದ್ರಾ ಜಲಾಶಯದಿಂದ ಅಜ್ಜಂಪುರ ಸುರಂಗದವರೆಗೆ ನೀರನ್ನು ಲಿಫ್ಟ್ ಮಾಡುವ (ಪ್ಯಾಕೇಜ್-2) ಮತ್ತು ಅಜ್ಜಂಪುರ ಸುರಂಗ ನಿರ್ಮಾಣ ಮಾಡುವ (ಪ್ಯಾಕೇಜ್-3) ಕಾಮಗಾರಿಗಳು ಭೌತಿಕವಾಗಿ ಪೂರ್ಣಗೊಂಡಿರುತ್ತವೆ.
- ಯೋಜನೆಯಡಿ ಬರುವ ಪ್ಯಾಕೇಜ್-2 ಮತ್ತು 3ರ ಕಾಮಗಾರಿಗಳನ್ನು ಪೂರ್ಣಗೊಳಿಸಿ ಭದ್ರಾ ಜಲಾಶಯದಿಂದ ಅಜ್ಜಂಪುರ ಸುರಂಗದ ಮೂಲಕ ನೀರನ್ನು 2019-2020ನೇ ಸಾಲಿನಿಂದ ವಾಣಿ ವಿಲಾಸ ಸಾಗರಕ್ಕೆ ಹರಿಸಲಾಗಿರುತ್ತದೆ.

2. **ಹಂತ-2**

- ಎರಡನೇ ಹಂತದಲ್ಲಿ ಬರುವ ತರೀಕೆರೆ ಏತ ನೀರಾವರಿ, ಚಿತ್ರದುರ್ಗ ಶಾಖಾ ಕಾಲುವೆ, ಜಗಳೂರು ಶಾಖಾ ಕಾಲುವೆ ಮತ್ತು ತುಮಕೂರು ಶಾಖಾ

ಕಾಲುವೆ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು, ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ.

- ಹನಿ ನೀರಾವರಿ: ಯೋಜನೆಯಡಿ ಚಿತ್ರದುರ್ಗ ಶಾಖಾ ಕಾಲುವೆಯ, ತುಮಕೂರು ಶಾಖಾ ಕಾಲುವೆಯ ಮತ್ತು ಜಗಳೂರು ಶಾಖಾ ಕಾಲುವೆಯಡಿ ಹನಿ ನೀರಾವರಿ ಸೌಲಭ್ಯ ಕಲ್ಪಿಸುವ 7 ಪ್ಯಾಕೇಜ್ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. ಬಾಕಿ ಉಳಿದ ಅಚ್ಚುಕಟ್ಟು ಪ್ರದೇಶಕ್ಕೆ ಹನಿ ನೀರಾವರಿ ಸೌಲಭ್ಯ ಹಾಗೂ ಸದರಿ ಅಚ್ಚುಕಟ್ಟು ಪ್ರದೇಶದಲ್ಲಿ ಬರುವ ಕೆರೆಗಳಿಗೆ ಶೇ.50ರಷ್ಟು ನೀರನ್ನು ತುಂಬಿಸುವ ಕಾಮಗಾರಿಗಳ ಅಂದಾಜು ಪಟ್ಟಿಗಳು ಪರಿಶೀಲನಾ ಹಂತದಲ್ಲಿವೆ.

- ಫೀಡರ್ ಕಾಲುವೆಗಳು: ಚಿತ್ರದುರ್ಗ ಶಾಖಾ ಕಾಲುವೆಯಡಿ ಬರುವ ಹೊಳಲ್ಕೆರೆ ಫೀಡರ್ ಕಾಲುವೆಯ 3 ಪ್ಯಾಕೇಜ್ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.

- ಕೆರೆ ತುಂಬಿಸುವ ಕಾಮಗಾರಿಗಳು: ಚಳ್ಳಕೆರೆ ಮತ್ತು ಮೊಳಕಾಲ್ಮೂರು, ಪಾವಗಡ, ಶಿರಾ ಹಾಗೂ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕೆರೆಗಳನ್ನು ತುಂಬಿಸುವ ಕಾಮಗಾರಿಗಳು ಪ್ರಗತಿಯಲ್ಲಿವೆ.

- ಭದ್ರಾ ಮೇಲ್ದಂಡೆ ಯೋಜನೆಯ ಕಾಮಗಾರಿಗಳನ್ನು ಮಾರ್ಚ್–2024ರ ಅಂತ್ಯಕ್ಕೆ ಪೂರ್ಣಗೊಳಿಸಲು ಯೋಜಿಸಲಾಗಿದೆ.

ಯೋಜನೆಗೆ ಪ್ರಾರಂಭದಿಂದ ಇಲ್ಲಿಯವರೆಗೆ ಒಟ್ಟಾರೆ ಸಂಚಿತ ರೂ.6459.70 ಕೋಟಿ ಆರ್ಥಿಕ ಪ್ರಗತಿ  ಮಾಡಲಾಗಿರುತ್ತದೆ.

*****